ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ್. ಎಫ್. ಸಿ ನ್ಯಾಯಾಲಯ ಯಾದಗಿರಿ.

ಸಿಸಿ ನಂ. **1212/2022**

| | | |
|---|---|---|
| ಸಾಕ್ಷಿಯ ಹೆಸರುಃ | ಮೊಹನರೆಡ್ಡಿ | ಪ್ರಾಸಾಃ 5 |
| ತಂದೆ/ಗಂಡನ ಹೆಸರುಃ | ನವಾಜರೆಡ್ಡಿ | ಚಾಸಾಃ 8 |
| ವಯಸ್ಸು ಃ | 48 ವರ್ಷ | ದಿಃ 16-03-2026 |
| ಉದ್ಯೋಗಃ | ಮುಖ್ಯ ಪೇದೆ | ಸಾಕ್ಷಿದಾರರಿಗೆ ಪ್ರಮಾಣ ವಚನ ಭೋದಿಸಲಾಯಿತು. |
| ವಾಸ ಸ್ಥಳಃ | ಸೈದಾಪೂರ | |

ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ

ನಾನು 2018 ರಿಂದ ಇಲ್ಲಿಯವವರೆಗೆ ಸೈದಾಪೂರ ಪೋಲಿಸ ಠಾಣೆಯಲ್ಲಿ ನಾನು ಮುಖ್ಯ ಪೇದೆ ಎಂದು ಕರ್ತವ್ಯವನ್ನು ನಿರ್ವಹಿಸಿರುತ್ತೇನೆ.

ದಿನಾಂಕ 24-05-2022 ರಂದು ರಾತ್ರಿ 7.00 ಗಂಟೆ ಸುಮಾರಿಗೆ ನಾನು ಠಾಣೆಯಲ್ಲಿದ್ದಾಗ ಚಾಸಾಃ 1 ರವರು ಮುದ್ದೆ ಮಾಲು ಮತ್ತು ಜಪ್ತಿ ಪಂಚನಾಮೆಯನ್ನು ಹಾಜರು ಪಡಿಸಿದಾಗ ನಾನು ಸದರಿ ಆಧಾರದ ಮೇಲೆ ನಮ್ಮ ಠಾಣಾ ಗುನ್ನೆ ಸಂಖ್ಯೆಃ 60/2022 ನ್ನು ದಾಖಲಿಸಿಕೊಂಡಿರುತ್ತೇನೆ. ನಂತರ ಪ್ರ.ವ.ವರದಿಯನ್ನು ನ್ಯಾಯಾಲಯಕ್ಕೆ ಕಳುಹಿಸಿರುತ್ತೇನೆ. ನಂತರ ಪ್ರ. ವ. ವರದಿಯನ್ನು ತೋರಿಸಲಾಗಿ ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-3 ಎಂದು ಸಾಕ್ಷಿಯ ಸಹಿ ನಿಪಿ-3(ಎ) ಎಂದು ಗುರುತಿಸಲಾಯಿತು. ನಂತರ ಚಾಸಾಃ 4 ರಿಂದ 6 ರವರ ಹೇಳಿಕೆಗಳನ್ನು ಪಡೆದಿರುತ್ತೇನೆ. ಸಾಕ್ಷಿಗೆ ಒಂದು ದಾಖಲಾತಿ ತೋರಿಸಲಾಗಿ ಅದು ಜಪ್ತಿ ಪಂಚನಾಮೆ ಆಗಿದ್ದು ಅದನ್ನು ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-1 ಎಂದು ಸಾಕ್ಷಿಯ ಸಹಿ ನಿಪಿ-1(ಡಿ) ಎಂದು ಗುರುತಿಸಲಾಯಿತು. ತಜ್ಞರ ವರದಿಯನ್ನು ನಿಪಿ-4, ಅಬಕಾರಿ ಇಲಾಖೆಕೆ ಕಳುಹಿಸಿದ ಪತ್ರವನ್ನು ನಿಪಿ-5 ಮತ್ತು ಸಾಕ್ಷಿಯ ಸಹಿಯನ್ನು ನಿಪಿ-5(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಆರೋಪಿ ಮತ್ತು ಮು. ಮಾ. ನೋಡಿದರೆ ಗುರುತಿಸುತ್ತೇನೆ ಎಂದು ನುಡಿದಿರುತ್ತಾರೆ. ದಿನಾಂಕಃ 05-08-2024 ರಂದು ನ್ಯಾಯಾಲಯಕ್ಕೆ ಅಂತಿಮ ವರದಿಯನ್ನು ಸಲ್ಲಿಸಿರುತ್ತೇನೆ.

ಪಾಟಿ ಸವಾಲುಃ ಆರೋಪಿ ಪರ ಶ್ರೀ. ಎಮ್, ಆರ್. ಬಿ ವಕೀಲರಿಂದ.

1. ಠಾಣೆಯಿಂದ ಕರಿಬೆಟ್ಟ ಕ್ರಾಸ್ 3 ಕಿ. ಮೀ. ಅಂತರದಲ್ಲಿದೆ. ದಾಬಾದ ಹೆಸರು ಪವನ ದಾಬಾ. ರಟ್ಟಿನ ಬಾಕ್ಸ ನ್ಯಾಯಲಯಕ್ಕೆ ಹಾಜರರಪಡಿಸಿರುವುದಿಲ್ಲ. ತಜ್ಞರ ವರದಿಗೆ ಔಟ ವರ್ಡ ನಂಬರ

ಇರುವುದಿಲ್ಲ ಎಂದರೆ ಸರಿ. ಠಾಣೆಯಲ್ಲಿ ಸಾಕ್ಷಿದಾರರ ಹೇಳಿಕೆ ಪಡೆದುಕೊಂಡು ಸುಳ್ಳು ವರದಿ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ಚಾಸಾಃ 1 ರವರ ಮಾತು ಕೇಳಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ.

(ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು).

ಓ. ಹೇ. ಕೇ. ಸರಿ ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು ಯಾದಗಿರಿ